Akashvani: Bangalore
National News In Kannada
14.11.2025 : 13.10hrs
**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

**ಮುಖ್ಯಾಂಶಗಳು**

1. ಬಿಹಾರ ವಿಧಾನಸಭಾ ಚುನಾವಣೆ: ಬಿಜೆಪಿ ನೇತೃತ್ವದ ಎನ್‌ಡಿಎ ಮೈತ್ರಿಕೂಟಕ್ಕೆ ಭರ್ಜರಿ ಗೆಲುವು: ಮತ್ತೆ ಆಡಳಿತದ ಚುಕ್ಕಾಣಿ; ಮಹಾಘಟ ಬಂಧನಕ್ಕೆ ಭಾರಿ ಹಿನ್ನಡೆ
2. ಭಾರತೀಯ ದೂರಸಂಪರ್ಕ ಸೇವೆಯ ವಜ್ರ ಮಹೋತ್ಸವ ಆಚರಣೆಯಲ್ಲಿ ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಭಾಗಿ
3. ಇಂದು ವಿಶ್ವ ಮಧುಮೇಹ ದಿನ; ತುರ್ತು - ಸಂಘಟಿತ ಕ್ರಮಕ್ಕಾಗಿ ವಿಶ್ವ ಆರೋಗ್ಯ ಸಂಸ್ಥೆ ಕರೆ
4. ದೆಹಲಿಯಲ್ಲಿ ಇಂದಿನಿಂದ ಅಂತಾರಾಷ್ಟ್ರೀಯ ವ್ಯಾಪಾರ ಮೇಳ ಆರಂಭ
5. ಕೋಲ್ಕತ್ತಾ ಟೆಸ್ಟ್ ಕ್ರಿಕೆಟ್; ಭಾರತದ ವಿರುದ್ಧ ಸಾಧಾರಣ ಮೊತ್ತ ದಾಖಲಿಸುವತ್ತ ಪ್ರವಾಸಿ ತಂಡ

**********

ಇಡೀ ದೇಶದ ಗಮನ ಸೆಳೆದಿರುವ ಬಿಹಾರ ವಿಧಾನಸಭಾ ಚುನಾವಣೆಯ ಮತ ಎಣಿಕೆ ಕಾರ್ಯ ಭಾರಿ ಬಿಗಿ ಭದ್ರತೆಯಲ್ಲಿ ನಡೆದಿದೆ. ಈವರೆಗೆ ಲಭ್ಯವಿರುವ ಮಾಹಿತಿಯಂತೆ ಬಿಜೆಪಿ ನೇತೃತ್ವದ ಎನ್‌ಡಿಎ ಮೈತ್ರಿಕೂಟ ಭರ್ಜರಿ ಗೆಲುವಿನತ್ತ ಸಾಗಿದೆ. ಪ್ರತಿಸ್ಪರ್ಧಿ ಮಹಾಘಟ ಬಂಧನ ತೀವ್ರ ಹಿನ್ನಡೆ ಅನುಭವಿಸಿದೆ. ಪ್ರಶಾಂತ್ ಕಿಶೋರ್ ಅವರ ಜನ ಸೂರಜ್ ಪಕ್ಷ ಮೊದಲ ಪ್ರಯತ್ನದಲ್ಲೇ ವಿಫಲವಾಗಿದೆ. ಬಿಹಾರದ ೩೮ ಜಿಲ್ಲೆಗಳ ೪೬ ಮತ ಎಣಿಕೆ ಕೇಂದ್ರಗಳಲ್ಲಿ ೨೪೩ ವಿಧಾನಸಭಾ ಕ್ಷೇತ್ರಗಳ ಮತ ಎಣಿಕೆ ಕಾರ್ಯ ಪ್ರಗತಿಯಲ್ಲಿದೆ. ಇತ್ತೀಚಿನ ವರದಿಯಂತೆ ಎನ್‌ಡಿಎ ಮೈತ್ರಿಕೂಟ ೧೯೦ ಕ್ಕೂ ಅಧಿಕ ಸ್ಥಾನಗಳಲ್ಲಿ ಮುನ್ನಡೆ ಕಾಯ್ದುಕೊಂಡಿದ್ದರೆ, ಮಹಾಘಟ ಬಂಧನ ೪೦ ಕ್ಕೂ ಅಧಿಕ ಸ್ಥಾನಗಳಲ್ಲಿ ಮುನ್ನಡೆ ಸಾಧಿಸಿದೆ. ಬಿಜೆಪಿ ೮೮, ಜೆಡಿಯು ೭೮, ಎಲ್‌ಜೆಪಿ ೨೧, ಆರ್‌ಜೆಡಿ ೩೩, ಕಾಂಗ್ರೆಸ್ ೪ ಹಾಗೂ ಪಕ್ಷೇತರರು ೧೮ ಸ್ಥಾನಗಳಲ್ಲಿ ಮುನ್ನಡೆಯನ್ನು ಕಾಯ್ದುಕೊಂಡಿದ್ದಾರೆ. ಉಪಮುಖ್ಯಮಂತ್ರಿಗಳು ಹಾಗೂ ಬಿಜೆಪಿ ಅಭ್ಯರ್ಥಿಗಳಾದ ವಿಜಯ್ ಕುಮಾರ್ ಸಿನ್ಹಾ ಮತ್ತು ಸಮರ್ಥ್ ಚೌಧರಿ ತಮ್ಮ ಪ್ರತಿಸ್ಪರ್ಧಿಗಳಿಗಿಂತ ಭಾರಿ ಮುನ್ನಡೆ ಕಾಯ್ದುಕೊಂಡಿದ್ದಾರೆ. ಬಿಜೆಪಿಯ ಮೈಥಿಲಿ ಠಾಕೂರ್, ಅಲಿನಗರ ಮತ್ತು ಬಿಜೆಪಿ ಹಿರಿಯ ನಾಯಕ ಮಂಗಲ್ ಪಾಂಡೆ, ಸಿವಾನ್‌ನಲ್ಲಿ ಮುನ್ನಡೆ ಕಂಡಿದ್ದಾರೆ. ಆರ್‌ಜೆಡಿಯ ತೇಜಸ್ವಿ ಪ್ರಸಾದ್ ಯಾದವ್, ರಾಘೋಪುರ್‌ದಲ್ಲಿ ಹಾಗೂ ಬಿಜೆಪಿ ಹಿರಿಯ ನಾಯಕ ಪ್ರೇಮ್ ಕುಮಾರ್, ಗಯಾ ಪಟ್ಟಣದಲ್ಲಿ ಮುನ್ನಡೆ ಸಾಧಿಸಿದ್ದಾರೆ. ೨೪೩ ಚುನಾವಣಾಧಿಕಾರಿಗಳು, ಮತ ಎಣಿಕೆ ಕಾರ್ಯದ ಮೇಲೆ ನಿಗಾ ಇರಿಸಿದ್ದು, ೨೪೩ ವೀಕ್ಷಕರು ಅವರಿಗೆ ಸಹಕಾರ ನೀಡುತ್ತಿದ್ದಾರೆ. ೧೮ ಸಾವಿರಕ್ಕೂ ಅಧಿಕ ಕೌಂಟಿಂಗ್ ಏಜೆಂಟ್‌ಗಳನ್ನು ನೇಮಕ ಮಾಡಲಾಗಿದೆ. ೨೪೩ ಕ್ಷೇತ್ರಗಳಿಗೆ ನವೆಂಬರ್ ೬ ಮತ್ತು ೧೧ ರಂದು ಎರಡು ಹಂತಗಳಲ್ಲಿ ಚುನಾವಣೆ ನಡೆದಿತ್ತು. ಈ ಚುನಾವಣೆಯಲ್ಲಿ, ಬಿಹಾರವು ೧೯೫೧ ರಿಂದೀಚೆಗೆ ಶೇಕಡ ೬೭.೧೩ ರಷ್ಟು ಅತಿ ಹೆಚ್ಚು ಮತದಾನವನ್ನು ದಾಖಲಿಸಿದೆ. ಎರಡು ಸಾವಿರದ ೬೧೬ ಅಭ್ಯರ್ಥಿಗಳ ರಾಜಕೀಯ ಭವಿಷ್ಯ ಇಂದು ನಿರ್ಧಾರವಾಗಲಿದೆ.

**********

ಬಿಹಾರದ ಮತದಾರರು ಮತ್ತೆ ಎನ್‌ಡಿಎ ಮೈತ್ರಿಕೂಟಕ್ಕೆ ಮನ್ನಣೆ ನೀಡಿದ್ದಾರೆ. ಭಾರಿ ಕುತೂಹಲ ಕೆರಳಿಸಿದ್ದ ವಿಧಾನಸಭಾ ಚುನಾವಣೆಯ ಮತ ಎಣಿಕೆ ಪ್ರಗತಿಯಲ್ಲಿದ್ದು, ಬಿಜೆಪಿ ನೇತೃತ್ವದ ಎನ್‌ಡಿಎ ಮೈತ್ರಿಕೂಟ ಬಿಹಾರದಲ್ಲಿ ಮತ್ತೆ ಅಧಿಕಾರದ ಚುಕ್ಕಾಣಿ ಹಿಡಿಯಲಿದೆ.

ರಾಜಕೀಯ ಜಿದ್ದಾಜಿದ್ದಿಗೆ ಹೆಸರಾದ ಬಿಹಾರದಲ್ಲಿ ಮತದಾರರು ಮತ್ತೆ ಎನ್‌ಡಿಎ ಮೈತ್ರಿಕೂಟಕ್ಕೆ ಬಹುಮತ ನೀಡಿದ್ದು, ಕಾಂಗ್ರೆಸ್ ನೇತೃತ್ವದ ಮಹಾಘಟ ಬಂಧನವನ್ನು ಬಹುತೇಕ ತಿರಸ್ಕರಿಸಿದ್ದಾರೆ. ಬಿಜೆಪಿ ಸ್ವತಂತ್ರವಾಗಿ ಅತಿ ಹೆಚ್ಚು ಸ್ಥಾನಗಳನ್ನು ಗೆಲ್ಲುವತ್ತ ಸಾಗಿದ್ದು, ಅದು ಅತಿ ದೊಡ್ಡ ಪಕ್ಷವಾಗಿ ಹೊರಹೊಮ್ಮುವ ಹಾದಿಯಲ್ಲಿದೆ. ಆ ಮೂಲಕ ಕಳೆದ ಚುನಾವಣೆಗಿಂತ ತನ್ನ ಸ್ಥಾನಗಳನ್ನು ಹೆಚ್ಚಿಸಿಕೊಂಡಿದೆ. ಅಂತೆಯೇ, ಮಿತ್ರಪಕ್ಷ ಜೆಡಿಯು ಕೂಡ ಅಧಿಕ ಸ್ಥಾನಗಳಲ್ಲಿ ಮುನ್ನಡೆ ಗಳಿಸಿ, ತನ್ನ ಸ್ಥಾನವನ್ನು ಮತ್ತಷ್ಟು ಭದ್ರಪಡಿಸಿಕೊಂಡಿದೆ. ಆದರೆ, ಮಹಾಘಟ ಬಂಧನ ಮೈತ್ರಿಕೂಟದ ಭಾಗವಾಗಿರುವ ಕಾಂಗ್ರೆಸ್, ಆರ್‌ಜೆಡಿ ಪಕ್ಷಗಳು ತೀವ್ರ ಹಿನ್ನಡೆ ಅನುಭವಿಸಿವೆ. ಕಾಂಗ್ರೆಸ್ ಕಳೆದ ಚುನಾವಣೆಗಿಂತ ಅತಿ ಕಡಿಮೆ ಸ್ಥಾನಗಳನ್ನು ಗೆಲ್ಲುವತ್ತ ಸಾಗಿದ್ದು, ಅದು ಎರಡಂಕಿ ದಾಟುವ ಸಾಧ್ಯತೆಗಳಿಲ್ಲ. ಆರ್‌ಜೆಡಿ ಕೂಡ ಕೆಲವೇ ಕ್ಷೇತ್ರಗಳಲ್ಲಿ ಮುನ್ನಡೆ ಕಾಯ್ದುಕೊಂಡಿದೆ. ಹಿಂದಿನ ಚುನಾವಣೆಗೆ ಹೋಲಿಸಿದರೆ, ಆರ್‌ಜೆಡಿ ಅರ್ಧಕ್ಕೂ ಅಧಿಕ ಸ್ಥಾನಗಳನ್ನು ಕಳೆದುಕೊಳ್ಳುವ ಸ್ಥಿತಿ ತಲುಪಿದೆ. ಒಟ್ಟಾರೆ ಬಿಹಾರದ ಫಲಿತಾಂಶವನ್ನು ಅವಲೋಕಿಸುವುದಾದರೆ, ಮತದಾರರು ಬಿಜೆಪಿ, ಜೆಡಿಯು ಮೈತ್ರಿಕೂಟ

ಅಭಿವೃದ್ಧಿ ಪರ ಮತ ಹಾಕುವಂತೆ ಮಾಡಿದ್ದ ಮನವಿಗೆ ಸ್ಪಂದಿಸಿ ಮತ್ತೆ ಎನ್‌ಡಿಎಗೆ ಸಂಪೂರ್ಣ ಜನಾದೇಶ ನೀಡಿದ್ದಾರೆ ಎನ್ನಬಹುದು.

**********

ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಅವರು ಇಂದು ನವದೆಹಲಿಯ ವಿಜ್ಞಾನ ಭವನದಲ್ಲಿ ನಡೆಯಲಿರುವ ಭಾರತೀಯ ದೂರಸಂಪರ್ಕ ಸೇವೆಯ ವಜ್ರ ಮಹೋತ್ಸವ ಆಚರಣೆಯಲ್ಲಿ ಭಾಗವಹಿಸಲಿದ್ದಾರೆ. ಈ ಕಾರ್ಯಕ್ರಮವು ಭಾರತೀಯ ದೂರಸಂಪರ್ಕ ಸೇವೆಯ ೬೦ ವರ್ಷ ಪೂರೈಸಿರುವುದರ ಸಂಕೇತವಾಗಿದೆ ಮತ್ತು ಭಾರತದ ದೂರಸಂಪರ್ಕ ಕ್ಷೇತ್ರದ ಅಭಿವೃದ್ಧಿಗೆ ಸೇವೆಯ ಕೊಡುಗೆಗಳನ್ನು ಎತ್ತಿ ತೋರಿಸುತ್ತದೆ. ೧೯೬೫ರಲ್ಲಿ ಸ್ಥಾಪನೆಯಾದ ಭಾರತೀಯ ದೂರಸಂಪರ್ಕ ಸೇವೆ-ಐಟಿಎಸ್ ಸರ್ಕಾರದ ಸಂಘಟಿತ ನಾಗರಿಕ ಸೇವೆಯಾಗಿದೆ. ದೂರಸಂಪರ್ಕಕ್ಕೆ ಸಂಬಂಧಿಸಿದ ಕ್ಷೇತ್ರಗಳಲ್ಲಿ ಸರ್ಕಾರದ ತಾಂತ್ರಿಕ-ವ್ಯವಸ್ಥಾಪನಾ ಅವಶ್ಯಕತೆಗಳನ್ನು ಪೂರೈಸಲು ಈ ಸೇವೆಯನ್ನು ರಚಿಸಲಾಗಿದೆ.

**********

ಇಂದು ವಿಶ್ವ ಮಧುಮೇಹ ದಿನ. ಈ ಸಂದರ್ಭದಲ್ಲಿ, ವಿಶ್ವ ಆರೋಗ್ಯ ಸಂಸ್ಥೆಯ ಆಗ್ನೇಯ ಏಷ್ಯಾ ಪ್ರದೇಶವು ಹೆಚ್ಚುತ್ತಿರುವ ಮಧುಮೇಹದ ಹೊರೆಯನ್ನು ನಿಭಾಯಿಸಲು ತುರ್ತು ಮತ್ತು ಸಂಘಟಿತ ಕ್ರಮಕ್ಕಾಗಿ ಕರೆ ನೀಡಿದೆ, ವಿಶ್ವಾದಾದ್ಯಂತ ೧೭ ಕೋಟಿ ೯೦ ಲಕ್ಷಕ್ಕೂ ಅಧಿಕ ಮಧುಮೇಹಿಗಳಿದ್ದಾರೆ. ಅಂದರೆ, ವಿಶ್ವದ ಒಟ್ಟು ಜನಸಂಖ್ಯೆಯ ಸುಮಾರು ಮೂರನೇ ಒಂದು ಭಾಗದಷ್ಟು ಜನರು ಮದುಮೇಹ ಕಾಯಿಲೆಯಿಂದ ಬಳಲುತ್ತಿದ್ದಾರೆ. ಈ ವರ್ಷದ ಧ್ಯೇಯ ವಾಕ್ಯ - ಜೀವನದ ಹಂತಗಳಲ್ಲಿ ಮಧುಮೇಹ- "ಬಾಲ್ಯದಿಂದ ವೃದ್ಧಾಪ್ಯದವರೆಗೆ ಸಮಾನ ಮತ್ತು ವಯಸ್ಸಿಗೆ ಸೂಕ್ತವಾದ ಆರೈಕೆಯ ಅಗತ್ಯತೆಯನ್ನು ಒತ್ತಿಹೇಳುತ್ತದೆ. ತಡವಾಗಿ ರೋಗಪತ್ತೆ, ಸಾಕಷ್ಟು ಚಿಕಿತ್ಸೆ ಮತ್ತು ರಕ್ತದಲ್ಲಿನ ಗ್ಲೂಕೋಸ್ ಮಟ್ಟವನ್ನು ಸರಿಯಾಗಿ ನಿಯಂತ್ರಿಸದ ಕಾರಣ ಮಧುಮೇಹವು ಗಂಭೀರ ಸವಾಲನ್ನು ಒಡ್ಡುತ್ತಲೇ ಇದೆ ಎಂದು ವಿಶ್ವ ಆರೋಗ್ಯ ಸಂಸ್ಥೆಯ ಆಗ್ನೇಯ ಏಷ್ಯಾದ ಉಸ್ತುವಾರಿ ಅಧಿಕಾರಿ ಡಾ. ಕ್ಯಾಥರಿನಾ ಬೋಹ್ಮ್ ಹೇಳಿದ್ದಾರೆ. ಮಧುಮೇಹ ಹೊಂದಿರುವ ಮೂರು ವಯಸ್ಕರಲ್ಲಿ ಒಬ್ಬರು ಮಾತ್ರ ಚಿಕಿತ್ಸೆ ಪಡೆಯುತ್ತಾರೆ ಮತ್ತು ಶೇಕಡ ೧೫ ಕ್ಕಿಂತ ಕಡಿಮೆ ಜನರು ತಮ್ಮ ರಕ್ತದಲ್ಲಿನ ಗ್ಲೂಕೋಸ್ ಅನ್ನು ಸಮರ್ಪಕವಾಗಿ ನಿಯಂತ್ರಿಸುವಲ್ಲಿ ಯಶಸ್ವಿಯಾಗುತ್ತಾರೆ. ಟೈಪ್ ೧ ಮಧುಮೇಹವನ್ನು ತಡೆಗಟ್ಟಲು ಸಾಧ್ಯವಾಗದಿದ್ದರೂ, ಪರಿಣಾಮಕಾರಿಯಾಗಿ ನಿರ್ವಹಿಸಬಹುದು. ಆದರೆ ನಿಯಮಿತ ದೈಹಿಕ ಚಟುವಟಿಕೆ, ಸಮತೋಲಿತ ಆಹಾರ ಮತ್ತು ತಂಬಾಕು ಹಾಗೂ ಮದ್ಯಪಾನವನ್ನು ತಪ್ಪಿಸುವ ಮೂಲಕ ಟೈಪ್ ೨ ಮಧುಮೇಹದ ಅಪಾಯವನ್ನು ಕಡಿಮೆ ಮಾಡಬಹುದು.

**********

೪೪ನೇ ಭಾರತ ಅಂತರರಾಷ್ಟ್ರೀಯ ವ್ಯಾಪಾರ ಮೇಳ-ಐಐಟಿಎಫ್ ಇಂದು ನವದೆಹಲಿಯ ಭಾರತ್ ಮಂಟಪದಲ್ಲಿ ಆರಂಭವಾಗಲಿದೆ. ವಾಣಿಜ್ಯ ಮತ್ತು ಕೈಗಾರಿಕಾ ರಾಜ್ಯ ಸಚಿವ ಜಿತಿನ್ ಪ್ರಸಾದ ಮೇಳವನ್ನು ಉದ್ಘಾಟಿಸಲಿದ್ದಾರೆ. ಈ ವರ್ಷದ ಮೇಳದ ವಿಷಯ ಏಕ್ ಭಾರತ್-ಶ್ರೇಷ್ಠ ಭಾರತ್" ಎಂಬುದಾಗಿದೆ. ಉತ್ತರ ಪ್ರದೇಶ, ರಾಜಸ್ಥಾನ, ಮಹಾರಾಷ್ಟ್ರ ಮತ್ತು ಬಿಹಾರ ಅಂತಾರಾಷ್ಟ್ರೀಯ ಕಾರ್ಯಕ್ರಮದ ಪಾಲುದಾರ ರಾಜ್ಯಗಳಾಗಿದ್ದರೆ, ಜಾರ್ಖಂಡ್ ಫೋಕಸ್ ರಾಜ್ಯವಾಗಿದೆ. ಯುಎಇ, ಚೀನಾ, ಇರಾನ್, ದಕ್ಷಿಣ ಕೊರಿಯಾ ಮತ್ತು ಈಜಿಪ್ಟ್ ಸೇರಿ ಹನ್ನೆರಡು ದೇಶಗಳು ೧೪ ದಿನಗಳ ಅಂತಾರಾಷ್ಟ್ರೀಯ ವ್ಯಾಪಾರ ಮೇಳದಲ್ಲಿ ಭಾಗವಹಿಸುತ್ತಿವೆ. ವ್ಯಾಪಾರ ಮೇಳವು ದೇಶೀಯ ಮತ್ತು ಅಂತಾರಾಷ್ಟ್ರೀಯ ವ್ಯಾಪಾರಕ್ಕೆ ಪ್ರಮುಖ ವೇದಿಕೆಯನ್ನು ಒದಗಿಸುತ್ತದೆ, ಇದು ವ್ಯಾಪಾರದಿಂದ ವ್ಯವಹಾರಕ್ಕೆ ಮತ್ತು ವ್ಯಾಪಾರದಿಂದ ಗ್ರಾಹಕರ ನಡುವಿನ ಸಂಪರ್ಕ ಉತ್ತೇಜಿಸುತ್ತದೆ. ಈ ಕುರಿತು ಆಕಾಶವಾಣಿಗೆ ಭಾರತೀಯ ವ್ಯಾಪಾರ ಉತ್ತೇಜನಾ ಸಂಸ್ಥೆ - ಐಟಿಪಿಒ ಕಾರ್ಯಕಾರಿ ನಿರ್ದೇಶಕ ಪ್ರೇಮ್‌ಜಿತ್‌ಲಾಲ್ ಹೆಚ್ಚಿನ ಮಾಹಿತಿ ನೀಡಿದ್ದಾರೆ.

ಮೇಳಕ್ಕೆ ಭೇಟಿ ನೀಡುವವರ ಅನುಕೂಲಕ್ಕಾಗಿ ವ್ಯಾಪಕ ಭದ್ರತಾ ವ್ಯವಸ್ಥೆಗಳು ಸೇರಿ ವಿಶೇಷ ಸೌಲಭ್ಯಗಳನ್ನು ಮಾಡಲಾಗಿದೆ. ಯಾವುದೇ ವೈದ್ಯಕೀಯ ತುರ್ತು ಪರಿಸ್ಥಿತಿಗಳನ್ನು ಎದುರಿಸಲು ಆವರಣದಲ್ಲಿ ಪ್ರಥಮ ಚಿಕಿತ್ಸಾ ಬೂತ್‌ಗಳನ್ನು ಸ್ಥಾಪಿಸಲಾಗಿದೆ ಮತ್ತು ತಕ್ಷಣದ ಸಹಾಯಕ್ಕಾಗಿ ಆಂಬ್ಯುಲೆನ್ಸ್‌ಗಳನ್ನು ನಿಯೋಜಿಸಲಾಗಿದೆ. ಮೇಳದ ಮೊದಲ ಐದು ದಿನ ವ್ಯಾಪಾರ ವರ್ಗಕ್ಕೆ ಮೀಸಲಾಗಿವೆ ಮತ್ತು, ಇದೇ ೧೯ರಂದು ಮೇಳವು ಸಾರ್ವಜನಿಕರ ಪ್ರವೇಶಕ್ಕೆ ಮುಕ್ತವಾಗಿರುತ್ತದೆ.

**********

ಭಾರತ ಮತ್ತು ಪ್ರವಾಸಿ ದಕ್ಷಿಣ ಆಫ್ರಿಕಾ ತಂಡಗಳ ನಡುವಿನ ಎರಡು ಟೆಸ್ಟ್ ಕ್ರಿಕೆಟ್ ಸರಣಿಯ ಮೊದಲ ಪಂದ್ಯ ಕೋಲ್ಕೊತಾದ ಈಡನ್ ಗಾರ್ಡನ್ಸ್ ಮೈದಾನದಲ್ಲಿ ನಡೆಯುತ್ತಿದೆ. ಟಾಸ್ ಗೆದ್ದು ದಕ್ಷಿಣ ಆಫ್ರಿಕಾ ತಂಡ ಬ್ಯಾಟಿಂಗ್ ಆಯ್ಕೆ ಮಾಡಿಕೊಂಡಿದ್ದು, ಇತ್ತೀಚಿನ ವರದಿ ಬಂದಾಗ ದಕ್ಷಿಣ ಆಫ್ರಿಕಾ ೫ ವಿಕೆಟ್ ನಷ್ಟಕ್ಕೆ ೧೩೬ ರನ್ ಗಳಿಸಿ ಉತ್ತಮ ಮೊತ್ತ ದಾಖಲಿಸುವತ್ತ ಸಾಗಿದೆ.

*****END*****